# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 63(96) |
| ಸದಸ್ಯರ ಹೆಸರು | ಡಾ|| ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 17-08-2026 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ತಾಂತ್ರಿಕ ಶಿಕ್ಷಣವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತ್ಯೇಕ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಯಾವುದಾದರು ಅಧಿಕೃತ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ; | ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ತಾಂತ್ರಿಕ ಶಿಕ್ಷಣವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತ್ಯೇಕ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪಿಸುವ ಕುರಿತು ಕೋರಿಕೆ ಸ್ವೀಕೃತವಾಗಿದೆ. |
| (ಆ) | ಒಂದು ವೇಳೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದಲ್ಲಿ ಅದು ಪ್ರಸ್ತುತ ಯಾವ ಹಂತದಲ್ಲಿದೆ. (ಆಡಳಿತಾತ್ಮಕ ಅನುಮೋದನೆ ಆರ್ಥಿಕ ಇಲಾಖೆಯ ಸಹಮತಿ ಅಥವಾ ಸ್ಥಳ ಗುರುತಿಸುವಿಕೆ ಕುರಿತು ಸಂಪೂರ್ಣ ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಗಳ ವಿವರ ಮತ್ತು ಕಳೆದ ಮೂರು ವರ್ಷಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿನಿಯರ ಸಂಖ್ಯೆ ಈ ಕೆಳಕಂಡಂತಿದೆ: |
| (ಇ) | ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣಕ್ಕೆ (ಪಾಲಿಟೆಕ್ನಿಕ್/ಇಂಜಿನಿಯರಿಂಗ್) ದಾಖಲಾಗಿರುವ ಮಹಿಳಾ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ಪ್ರತ್ಯೇಕ ಮಹಿಳಾ ಕಾಲೇಜಿನ ಬೇಡಿಕೆಯನ್ನು ಪರಿಗಣಿಸಿ ಸರ್ಕಾರವು ವಿಶೇಷ ಆದ್ಯತೆ ನೀಡಲಿದೆಯೇ; | (see table below) |

| ಸಂಸ್ಥೆ | ವರ್ಷ | ಒಟ್ಟು ಅನುಮೋದಿತ ಪ್ರವೇಶಾತಿ | ವಿದ್ಯಾರ್ಥಿನಿಯರಿಗಾಗಿ ಮೀಸಲಿಟ್ಟ ಪ್ರವೇಶಾತಿ | ಪ್ರವೇಶ ಪಡೆದ ವಿದ್ಯಾರ್ಥಿನಿಯರ ಸಂಖ್ಯೆ |
|---|---|---|---|---|
| ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಬೀದರ್ | 2023-24 | 120 | - | 58 |
| | 2024-25 | 210 | - | 113 |
| | 2025-26 | 210 | - | 135 |
| ಸರ್ಕಾರಿ ಪಾಲಿಟೆಕ್ನಿಕ್ ಬೀದರ್ | 2023-24 | 390 | 104 | 75 |
| | 2024-25 | 390 | 104 | 73 |
| | 2025-26 | 390 | 104 | 67 |
| ಸರ್ಕಾರಿ ಪಾಲಿಟೆಕ್ನಿಕ್ ಔರಾದ್ | 2023-24 | 180 | 50 | 20 |
| | 2024-25 | 210 | 57 | 8 |
| | 2025-26 | 210 | 57 | 24 |
| ಶ್ರೀ ಮಾಣಿಕ್ ರಾಂ ಪಾಟೇಲ್ ರೂರಲ್ ಪಾಲಿಟೆಕ್ನಿಕ್, ರಾಣಾಕುಶನೂರು | 2023-24 | 240 | 70 | 15 |
| | 2024-25 | 240 | 70 | 10 |
| | 2025-26 | 240 | 70 | 25 |
| ಬಸವಕಲ್ಯಾಣ ಪಾಲಿಟೆಕ್ನಿಕ್, ಬೀದರ್ | 2023-24 | 210 | - | 02 |
| | 2024-25 | 210 | - | 02 |
| | 2025-26 | 210 | - | 04 |

ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಒಟ್ಟು ಅನುಮೋದಿತ ಪ್ರವೇಶಾತಿಯಲ್ಲಿ ಶೇ.30 ರಷ್ಟು ಪ್ರವೇಶಾತಿಯನ್ನು ವಿದ್ಯಾರ್ಥಿನಿಯರಿಗಾಗಿ ಮೀಸಲಿಡಲಾಗಿದೆ.

ಮೇಲ್ಕಂಡ ಕಾಲೇಜುಗಳಲ್ಲಿ ಬೀದರ್ ಜಿಲ್ಲೆಯ ವಿದ್ಯಾರ್ಥಿನಿಯರು ವ್ಯಾಸಂಗ ಮಾಡಬಹುದಾಗಿದೆ.

| | | |
|---|---|---|
| ಈ) | ಹೊಸ ಕಾಲೇಜು ಸ್ಥಾಪನೆಗೆ ಅಗತ್ಯವಾದ ಭೂಮಿ, ಸುಸಜ್ಜಿತ ಕಟ್ಟಡದ ನಿರ್ಮಾಣ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳನ್ನು ಸೃಷ್ಟಿಸಿ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಉನ್ನತ ಶಿಕ್ಷಣ ಇಲಾಖೆಗೆ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನದಲ್ಲಿ ಅಭಿವೃದ್ಧಿಗಾಗಿ ಸೀಮಿತ ಅನುದಾನ ಲಭ್ಯವಿರುತ್ತದೆ. ಸದರಿ ಅನುದಾನದಲ್ಲಿ ಪ್ರಸ್ತುತ ಇರುವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಬಲವರ್ಧನೆಗೊಳಿಸಲಾಗುತ್ತಿದೆ.<br>ಬೀದರ್ ಜಿಲ್ಲೆಯಲ್ಲಿ ನೂತನ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಗಣನೆಯಲ್ಲಿ ಇರುವುದಿಲ್ಲ. |
| ಉ) | ಗಡಿ ಭಾಗ ಹಾಗೂ ಕಲ್ಯಾಣ ಕರ್ನಾಟಕ (Article 371J) ವ್ಯಾಪ್ತಿಗೆ ಬರುವ ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ವೃತ್ತಿಪರ ಶಿಕ್ಷಣಕ್ಕೆ ಉತ್ತೇಜನ ನೀಡಲು ವಿಶೇಷ ಪ್ಯಾಕೇಜ್ ಅಥವಾ ಕೇಂದ್ರ ಸರ್ಕಾರದ ಅನುದಾನವನ್ನು ಪಡೆಯುವ ಯೋಜನೆ ಸರ್ಕಾರದ ಮುಂದಿದೆಯೇ; | ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ವೃತ್ತಿಪರ ಶಿಕ್ಷಣಕ್ಕೆ ಉತ್ತೇಜನ ನೀಡಲು ವಿಶೇಷ ಪ್ಯಾಕೇಜ್ ಅಥವಾ ಕೇಂದ್ರ ಸರ್ಕಾರದ ಅನುದಾನ ಒದಗಿಸುವ ಯೋಜನೆ ಪ್ರಸ್ತುತ ಇರುವುದಿಲ್ಲ. |

ಕಡತ ಸಂಖ್ಯೆ: ಇಡಿ 83 ಹೆಚ್‌ಪಿಟಿ 2026

( ಬಸವರಾಜ ರಾಯರೆಡ್ಡಿ )
ಉನ್ನತ ಶಿಕ್ಷಣ ಸಚಿವರು